ಕರ್ನಾಟಕ ಸರ್ಕಾರ
ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ,–590001
OFFICE OF THE DEPUTY COMMISSIONER, BELAGAVI DISTRICT, BELAGAVI -590001
ದೂರವಾಣಿ/Telephone: 0831- 2407200, 2407273 Email: deo.belagavi@gmail.com

ಸಂ: ಸಿಎಎಲ್/ವಿವ-24/2025-26

ವಿಷಯ: ಜಿಲ್ಲೆಯ ಬೆಳಗಾವಿ, ಖಾನಾಪೂರ ಮತ್ತು ಕಿತ್ತೂರು ತಾಲ್ಲೂಕುಗಳಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ: 1.ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್)
2. ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಬೆಳಗಾವಿ (ದ) ಇವರ ಪತ್ರ ಸಂ: ಆಶಾ/ಉನಿ/ ಶಾರ/2025-26 ದಿನಾಂಕ: 25.06.2025.

*******

**ಪ್ರಸ್ತಾವನೆ:**

ಬೆಳಗಾವಿ ಜಿಲ್ಲೆಯ ಬೆಳಗಾವಿ, ಖಾನಾಪೂರ ಮತ್ತು ಕಿತ್ತೂರು ತಾಲ್ಲೂಕುಗಳಲ್ಲಿ ಧಾರಕಾರವಾಗಿ ಮಳೆಯಾಗುತ್ತಿರುವುದರಿಂದ ಮಕ್ಕಳ ಹಿತದೃಷ್ಟಿಯಿಂದ ದಿನಾಂಕ: 26.06.2025 ರಂದು ಬೆಳಗಾವಿ ನಗರ, ಬೆಳಗಾವಿ ಗ್ರಾಮೀಣ, ಖಾನಾಪೂರ ಮತ್ತು ಕಿತ್ತೂರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಲೆಗಳಿಗೆ ರಜೆ ನೀಡಲು ವಿನಂತಿಸಿರುತ್ತಾರೆ. ಪ್ರಯುಕ್ತ ದಿನಾಂಕ: 26.06.2025 ರಂದು ಬೆಳಗಾವಿ ನಗರ, ಬೆಳಗಾವಿ ಗ್ರಾಮೀಣ, ಖಾನಾಪೂರ ಮತ್ತು ಕಿತ್ತೂರು ತಾಲ್ಲೂಕುಗಳ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ದಿನಾಂಕ: 26.06.2025 ರಂದು ರಜೆ ಘೋಷಿಸುವಂತೆ ವಿನಂತಿಸಿರುತ್ತಾರೆ. ಮುಂದುವರೆದು ಬೆಳಗಾವಿ, ಖಾನಾಪೂರ ಮತ್ತು ಕಿತ್ತೂರು ತಾಲ್ಲೂಕುಗಳ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಶಾಲೆಗಳು, ಪದವಿ ಪೂರ್ವ ಕಾಲೇಜುಗಳು (12ನೇ ತರಗತಿ ವರೆಗೆ) ಮತ್ತು ಅಂಗನವಾಡಿಗಳಿಗೆ ವಿದ್ಯಾರ್ಥಿಗಳ ಮತ್ತು ಮಕ್ಕಳ ಸುರಕ್ಷತೆಯ ಹಿತದೃಷ್ಟಿಯಿಂದ ಅಗತ್ಯ ಮುನ್ನೆಚ್ಚರಿಕೆ ಕ್ರಮವಾಗಿ ಜಿಲ್ಲೆಯ ಬೆಳಗಾವಿ, ಖಾನಾಪೂರ ಮತ್ತು ಕಿತ್ತೂರು ತಾಲೂಕುಗಳಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34(ಎಮ್) ರಡಿ ಜಿಲ್ಲಾಧಿಕಾರಿ ಹಾಗೂ ಅಧ್ಯಕ್ಷರು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ರವರಿಗೆ ಪ್ರದತ್ತವಾದ ಅಧಿಕಾರದ ಮೇರೆಗೆ ಬೆಳಗಾವಿ ಜಿಲ್ಲೆಯ ಬೆಳಗಾವಿ ಮತ್ತು ಖಾನಾಪೂರ ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ (12 ನೇ ತರಗತಿವರೆಗೆ) ಮತ್ತು ಅಂಗನವಾಡಿಗಳಿಗೆ **ದಿನಾಂಕ: 26.06.2025 ರಂದು** ರಜೆ ಘೋಷಿಸುವ ಕುರಿತು ಈ ಕೆಳಗಿನಂತೆ ಆದೇಶ ಮಾಡಿದೆ.

**ಆದೇಶ**

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 34 (ಎಮ್) ರಡಿ ಪ್ರದತ್ತವಾದ ಅಧಿಕಾರದ ಮೇರೆಗೆ **ಬೆಳಗಾವಿ ಜಿಲ್ಲೆಯ** ಬೆಳಗಾವಿ, ಖಾನಾಪೂರ ಮತ್ತು ಕಿತ್ತೂರು ತಾಲ್ಲೂಕುಗಳಾದ್ಯಂತ ಎಲ್ಲಾ ಸರ್ಕಾರಿ, ಸರ್ಕಾರಿ ಅನುದಾನಿತ, ಅನುದಾನರಹಿತ ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ (12 ನೇ ತರಗತಿವರೆಗೆ) ಮತ್ತು ಅಂಗನವಾಡಿಗಳಿಗೆ **ಮುಂಜಾಗ್ರತ ಕ್ರಮವಾಗಿ ದಿನಾಂಕ: 26.06.2025 ರಂದು ರಜೆ ಘೋಷಿಸಿ ಆದೇಶಿಸಿದೆ.**

ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ ಹಾಗೂ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಬೆಳಗಾವಿ ರವರು ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದು ಹಾಗೂ ಈ ರಜಾ ಅವಧಿಯನ್ನು ಮುಂದಿನ ದಿನಗಳಲ್ಲಿ ಹೊಂದಾಣಿಕೆ ಮಾಡಿಕೊಳ್ಳುವುದು.

Digitally signed by
MOHAMMAD ROSHAN
Date: 25-06-2025
17:40:45

**ಜಿಲ್ಲಾಧಿಕಾರಿ ಹಾಗೂ ಅದ್ಯಕ್ಷರು**
**ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**

**ಪ್ರತಿ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ :**

1. ಪೊಲೀಸ್ ಆಯುಕ್ತರು, ಬೆಳಗಾವಿ ನಗರ, ಬೆಳಗಾವಿ
2. ಪೋಲಿಸ್ ಅಧೀಕ್ಷಕರು, ಬೆಳಗಾವಿ
3. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ, ಬೆಳಗಾವಿ
4. ಉಪವಿಬಾಗಾಧಿಕಾರಿಗಳು, ಬೆಳಗಾವಿ/ಬೈಲಹೊಂಗಲ
5. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಳಗಾವಿ
6. ಉಪನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ ಬೆಳಗಾವಿ
7. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬೆಳಗಾವಿ
8. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಬೆಳಗಾವಿ ರವರಿಗೆ ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸ್ಥಳೀಯ ಸುದ್ದಿ ಮಾದ್ಯಮಗಳಲ್ಲಿ ಪ್ರಕಟಿಸುವ ಕುರಿತು.
9. ತಹಶೀಲ್ದಾರ ಬೆಳಗಾವಿ/ಖಾನಾಪೂರ/ಕಿತ್ತೂರು

Digitally signed by
VIJAYKUMAR HONAKERI
Date: 25-06-2025
17:35:09

**ಅಪರ ಜಿಲ್ಲಾಧಿಕಾರಿ,**
**ಬೆಳಗಾವಿ ಜಿಲ್ಲೆ, ಬೆಳಗಾವಿ**